169ವಿಕೆ ೬
02

ಚುಕ್ಕೆ ಗುರುತಿನ ದಿನಾಂಕ
19/08/26

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ ಇವರು ನಿಯಮ-330 ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಯಲ್ಲಿ ಕೇಳಿರುವ ಪ್ರಶ್ನೆಗೆ ಉತ್ತರ.**

**ಸೂಚನೆ:**

ಹಾವೇರಿ ಜಿಲ್ಲೆಯ ಚೌಡಯ್ಯದಾನಪುರ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಕಾಯಕ ಕ್ಷೇತ್ರ ಹಾಗೂ ಐಕ್ಯ ಸ್ಥಳ ಸಮಾದಿ/ಗದ್ದುಗೆ ನಿರ್ಮಾಣದ ಬಗ್ಗೆ ಕಳೆದ ಹಲವಾರು ವರ್ಷಗಳಿಂದ ನಮ್ಮ ಸಮಾಜದ ಬಂಧುಗಳು ಆಗ್ರಹಿಸುತ್ತಿರುವ ಪರಿಣಾಮ ಈ ಬಗ್ಗೆ ಹಲವು ಬಾರಿ ಸದನದ ಗಮನಕ್ಕೆ ತಂದಿದ್ದರೂ ಭಾರತೀಯ ಪುರಾತತ್ತ್ವ ಸರ್ವೇಕ್ಷಣೆ ಇಲಾಖೆ ಮತ್ತು ಜಿಲ್ಲಾಡಳಿತದೊಂದಿಗೆ ಸಮಾಲೋಚನೆ ನಡೆಯುತ್ತಿದೆ ಎಂಬ ಒಂದೇ ಉತ್ತರ ಸರ್ಕಾರ ನೀಡುತ್ತ ಈ ಬಗ್ಗೆ ಯಾವ ಪ್ರಗತಿಯನ್ನು ಸಾಧಿಸದಿರುವುದು ಅತ್ಯಂತ ನೋವಿನ ಸಂಗತಿಯಾಗಿದ್ದು ಈ ವಿಷಯವನ್ನು ಅತ್ಯಂತ ಗಂಭಿರವಾಗಿ ಪರಿಗಣಿಸಿ ತುರ್ತು ಸಭೆ ನಡೆಸಿ ಅಂಬಿಗರ ಚೌಡಯ್ಯನವರ ಸಮಾಧಿಯ ಗದ್ದುಗೆಯನ್ನು ಕೂಡಲಸಂಗಮ ಬಸವಣ್ಣನವರ ಗದ್ದುಗೆಯನ್ನು ಕಟ್ಟಿದ ಮಾದರಿಯಲ್ಲಿ ಕಟ್ಟಲು ಸರ್ಕಾರ ಮುಂದಾಗುವ ಬಗ್ಗೆ ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಗಮನ ಸೆಳೆಯ ಬಯಸುತ್ತೇನೆ

*******

**ಉತ್ತರ:**

ಹಾವೇರಿ ಜಿಲ್ಲೆಯ ಗುತ್ತಲದ ಹತ್ತಿರ ತುಂಗಭದ್ರಾ ನದಿಯ ತೀರದಲ್ಲಿ ಚೌಡದಾನಪುರದಲ್ಲಿ ಶ್ರೀ ಮುಕ್ತಿನಾಥೇಶ್ವರ ದೇವಾಲಯವು ರಾಷ್ಟ್ರೀಯ ಸಂರಕ್ಷಿತ ಸ್ಮಾರಕವಾಗಿದ್ದು, ಕೇಂದ್ರ ಸಂಸ್ಕೃತಿ ಮಂತ್ರಾಲಯದ ಅಧೀನದಲ್ಲಿರುವ ಭಾರತೀಯ ಪುರಾತತ್ವ ಸರ್ವೇಕ್ಷಣೆಯ ವ್ಯಾಪ್ತಿಯಲ್ಲಿರುತ್ತದೆ. ಸದರಿ ದೇವಾಲಯದ 15 ಮೀಟರ್ ದೂರದಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರ ಸಮಾಧಿಯಿದೆ.

ರಾಷ್ಟ್ರೀಯ ಸಂರಕ್ಷಿತ ಸ್ಮಾರಕವಾಗಿರುವ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಸಮಾಧಿಯನ್ನು ಅಭಿವೃದ್ಧಿ ಪಡಿಸುವ ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಟಿಒಆರ್ 106 ಟಿಡಿವಿ 2025, ದಿನಾಂಕ:19.09.2025ರಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ (ಪ್ರತಿ ಲಗತ್ತಿಸಿದೆ). ಇದು ಕೇಂದ್ರ ಸಂರಕ್ಷಿತ ಸ್ಮಾರಕದ ನೂರು ಮೀಟರ್ ನಿಷೇದಿತ ಪ್ರದೇಶದಲ್ಲಿ ಬರುತ್ತದೆ. ಆದ್ದರಿಂದ, ಈ ಸಂಬಂಧ ರೂಪುರೇಷೆಗಳನ್ನು ಸಿದ್ಧಪಡಿಸಿ ಭಾರತೀಯ ಪುರಾತತ್ವ ಸಂರಕ್ಷಣಾ (ASI) ಇಲಾಖೆಯ ಅನುಮೋದನೆ ಪಡೆದು ನಂತರ ಅಂಬಿಗರ ಚೌಡಯ್ಯನವರ ಸಮಾಧಿಯ ಗದ್ದುಗೆಯ ನಿರ್ಮಾಣದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

**TOR 169 TDV 2026**

(ಕೆ.ಜೆ.ಜಾರ್ಜ್)
ಇಂಧನ ಹಾಗೂ ಪ್ರವಾಸೋದ್ಯಮ ಸಚಿವರು

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಅಂಬಿಗರ ಚೌಡಯ್ಯನವರ ಸಮಾಧಿಯನ್ನು ಅಭಿವೃದ್ಧಿಪಡಿಸುವ ಸಂಬಂಧ ಸಮಿತಿ ರಚಿಸುವ ಕುರಿತು.

**ಪ್ರಸ್ತಾವನೆ:**

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:1448 ಯಲ್ಲಿ ಶ್ರೀ ನಿಜ ಶರಣ ಅಂಬಿಗರ ಚೌಡಯ್ಯನವರ ಸಮಾಧಿಯ ಗದ್ದುಗೆಯನ್ನು ಅಭಿವೃದ್ಧಿಪಡಿಸುವ ಕುರಿತು ಕೇಳಲಾದ ಪ್ರಶ್ನೆಗೆ ದಿನಾಂಕ:20.03.2025ರಂದು ಸದನದಲ್ಲಿ ಉತ್ತರಿಸುತ್ತಾ, ಮಾನ್ಯ ಇಲಾಖಾ ಸಚಿವರು ಶ್ರೀ ಅಂಬಿಗರ ಚೌಡಯ್ಯನವರ ಸಮಾಧಿಯನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಐದು ಜನರನ್ನೊಳಗೊಂಡ ಸಮಿತಿಯನ್ನು ರಚಿಸಲಾಗುವುದು ಎಂದು ತಿಳಿಸಿದ್ದರು.

ಅದರಂತೆ, ಹಾವೇರಿ ಜಿಲ್ಲೆಯ ರಾಣೇಬೆನ್ನೂರು ತಾಲ್ಲೂಕಿನ ಚೌಡಯ್ಯದಾನಪುರ ಇಲ್ಲಿರುವ ನಿಜಶರಣ ಶ್ರೀ ಅಂಬಿಗರ ಚೌಡಯ್ಯನವರ ಸಮಾಧಿಯನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಸಮಿತಿ ರಚಿಸಲು ನಿರ್ಣಯಿಸಿ, ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಟಿಓಆರ್ 106 ಟಿಡಿವಿ 2025.**
**ಬೆಂಗಳೂರು ದಿನಾಂಕ: 19.09.2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಾವೇರಿ ಜಿಲ್ಲೆಯ ರಾಣೇಬೆನ್ನೂರು ತಾಲ್ಲೂಕಿನ ಚೌಡಯ್ಯದಾನಪುರ ಇಲ್ಲಿರುವ ನಿಜಶರಣ ಶ್ರೀ ಅಂಬಿಗರ ಚೌಡಯ್ಯನವರ ಸಮಾಧಿಯನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಈ ಕೆಳಕಂಡ ಸಮಿತಿಯನ್ನು ರಚಿಸಿ ಆದೇಶಿಸಿದೆ:-

| ಕ್ರ.ಸಂ | ಮಾನ್ಯ ರಾಜ್ಯ ಸಂಸದರ ಹಾಗೂ ಸರ್ಕಾರದ ಉನ್ನತ ಅಧಿಕಾರಿಗಳ ಹೆಸರು / ಪದನಾಮ | ನೇಮಕ ಮಾಡಿರುವ ಹುದ್ದೆ |
|---|---|---|
| 1. | ಶ್ರೀ ರುದ್ರಪ್ಪ ಮಾನಪ್ಪ ಲಮಾಣಿ<br>ಮಾನ್ಯ ಉಪ ಸಭಾಧ್ಯಕ್ಷರು,<br>ಕರ್ನಾಟಕ ವಿಧಾನ ಸಭೆ<br>ಹಾಗೂ ಮಾನ್ಯ ವಿಧಾನ ಸಭಾ ಸದಸ್ಯರು,<br>ಹಾವೇರಿ ವಿಧಾನ ಸಭಾ ಕ್ಷೇತ್ರ | ಅಧ್ಯಕ್ಷರು |
| 2. | ಶ್ರೀ ಪ್ರಕಾಶ್ ಕೆ. ಕೋಳಿವಾಡ್,<br>ಮಾನ್ಯ ವಿಧಾನ ಸಭಾ ಸದಸ್ಯರು,<br>ರಾಣೇಬೆನ್ನೂರ್ ವಿಧಾನ ಸಭಾ ಕ್ಷೇತ್ರ | ಸದಸ್ಯರು |
| 3. | ಶ್ರೀ ತಿಪ್ಪಣ್ಣಪ್ಪ ಕಮಕನೂರ<br>ಮಾನ್ಯ ವಿಧಾನ ಪರಿಷತ್ ಸದಸ್ಯರು. | ಸದಸ್ಯರು |
| 4. | ಆಯುಕ್ತರು,<br>ಪ್ರವಾಸೋದ್ಯಮ ಇಲಾಖೆ | ಸದಸ್ಯರು |
| 5. | ಆಯುಕ್ತರು,<br>ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರ ಇಲಾಖೆ | ಸದಸ್ಯ ಕಾರ್ಯದರ್ಶಿ |

--2

ಮೇಲ್ಕಂಡ ಸಮಿತಿಯು ನಿಜಶರಣ ಶ್ರೀ ಅಂಬಿಗರ ಚೌಡಯ್ಯನವರ ಸಮಾಧಿಯನ್ನು ಅಭಿವೃದ್ಧಿಪಡಿಸುವ ಕುರಿತು ವಿವರವಾದ ವರದಿಯನ್ನು ಎರಡು ತಿಂಗಳುಗಳ ಅವಧಿಯಲ್ಲಿ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
19/09/23
(ಮುಹಮ್ಮದ್ ಇಬ್ರಾಹಿಂ)
ಸರ್ಕಾರದ ಅಧೀನ ಕಾರ್ಯದರ್ಶಿ,
ಪ್ರವಾಸೋದ್ಯಮ ಇಲಾಖೆ.

**ಇವರಿಗೆ:**

1. ಶ್ರೀ ರುದ್ರಪ್ಪ, ಮಾನಪ್ಪ, ಲಮಾಣಿ, ಮಾನ್ಯ ಉಪ ಸಭಾಪತಿಗಳು, ಕರ್ನಾಟಕ ವಿಧಾನ ಸಭೆ, ವಿಧಾನಸೌಧ, ಬೆಂಗಳೂರು.
2. ಶ್ರೀ ಪ್ರಕಾಶ್ ಕೆ. ಕೋಳಿವಾಡ್, ಶಾಸಕರು, ವಿಧಾನ ಸಭೆ, ವಾಗೀಶ ನಗರ, 7ನೇ ಕ್ರಾಸ್, ರಾಣೆಬೆನ್ನೂರು-581115
3. ಶ್ರೀ ತಿಪ್ಪಣ್ಣಪ್ಪ, ಕಮಕನೂರ, ಶಾಸಕರು, ಮಾನ್ಯ ವಿಧಾನ ಪರಿಷತ್, #11/1/29, ಚೌಡೇಶ್ರಿ ಕಾಲೋನಿ, ಬ್ರಹ್ಮಪುರ, ಕಲಬುರಗಿ-585103
4. ಮಹಾಲೇಖಪಾಲರು (ಲೆಕ್ಕಪತ್ರ / ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
5. ಆಯುಕ್ತರು, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು.
6. ಆಯುಕ್ತರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು.
7. ಜಂಟಿ ನಿರ್ದೇಶಕರು, ರಾಜ್ಯಹುಜೂರ್ ಖಜಾನೆ, ಬೆಂಗಳೂರು.

**ಪ್ರತಿ:**

1. ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ, ವಿಕಾಸಸೌಧ.
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಪ್ರವಾಸೋದ್ಯಮ ಇಲಾಖೆ